ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಬುಧವಾರ, ದಿನಾಂಕ: 17ನೇ ಜುಲೈ, 2019

ಇಲಾಖೆ ವತಿಯಿಂದ ನಿರುದ್ಯೋಗಿಗಳಿಗೆ ತರಬೇತಿ ನೀಡುವ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

210 (374) ಮಾನ್ಯ ಮುಜರಾಯಿ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆಯ ವ್ಯಾಪ್ತಿಯ ನಗರ ಮತ್ತು ಗ್ರಾಮೀಣ ಭಾಗದಲ್ಲಿರುವ ವಿದ್ಯಾವಂತ ನಿರುದ್ಯೋಗಿ ಯುವಕ-ಯುವತಿಯರಿಗೆ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯಕ್ಕೆ ಸಂಬಂಧಿಸಿದಂತೆ ಇರುವ ಯೋಜನೆಗಳಾವುವು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯಕ್ಕೆ ಸಂಬಂಧಿಸಿದಂತೆ ಕಳೆದ ಮೂರು ವರ್ಷಗಳಲ್ಲಿ ಸದರಿ ಕ್ಷೇತ್ರಕ್ಕೆ ಬಿಡುಗಡೆಗೊಳಿಸಿದ ಅನುದಾನವೆಷ್ಟು; (ಮಂಡ್ಯ ಜಿಲ್ಲೆಯ ತಾಲ್ಲೂಕುವಾರು ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆಯ ವ್ಯಾಪ್ತಿಯ ನಗರ ಮತ್ತು ಗ್ರಾಮೀಣ ಭಾಗದಲ್ಲಿರುವ ವಿದ್ಯಾವಂತ ನಿರುದ್ಯೋಗಿ ಯುವಕ-ಯುವತಿಯರು ವಿವಿಧ ಯೋಜನೆಗಳಿಗೆ ಸಂಬಂಧಿಸಿದಂತೆ ಎಷ್ಟು ಮಂದಿ ಅರ್ಜಿ ಸಲ್ಲಿಸಿರುತ್ತಾರೆ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ಯೋಜನೆಗಳಿಗೆ ಅರ್ಜಿ ಸಲ್ಲಿಸಿದವರಿಗೆ ತರಬೇತಿ ನೀಡದೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; ವಿಳಂಬವಾಗಲು ಕಾರಣಗಳೇನು? (ವಿವರ ನೀಡುವುದು)